**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 1868 / 2024**

**ಚಾಸಾ ಃ- 7 / ಪ್ರಾಸಾ ಃ- 6**

| | |
|---|---|
| ಹೆಸರು | ಕೃಷ್ಣಪ್ಪ |
| ತಂದೆಯ ಹೆಸರು | **ವೆಂಕಟರಮಣಯ್ಯ** |
| ವಯಸ್ಸು | **53** |
| ಉದ್ಯೋಗ | **ಎ ಎಸ್ ಐ , ಮಾಗಡಿ ಪೋಲಿಸ್ ಠಾಣೆ** |
| ವಿಳಾಸ | **ಮಾಗಡಿ ಟೌನ್** |

**ದಿನಾಂಕಃ 09.01.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

2021 ರಿಂದ ಇಲ್ಲಿಯವರೆಗೆ ಮಾಗಡಿ ಪೋಲಿಸ್ ಠಾಣೆಯಲ್ಲಿ ಎಎಸ್ಐ ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 30.01.2024 ರಂದು ನಾನು ಮಾಗಡಿ ಪೋಲಿಸ್ ಠಾಣಾ ಕರ್ತವ್ಯದಲ್ಲಿದ್ದಾಗ ಮಾಗಡಿ ಸರ್ಕಾರಿ ಆಸ್ಪತ್ರೆಯಿಂದ ಬಂದ ಮೆಮೋ ಪಡೆದು ಪರಿಶೀಲಿಸಲಾಗಿ ಶ್ರೀಮತಿ ರಾಜಮ್ಮ ಎಂಬುವವರು ಗ್ರಾಮದಲ್ಲಿ ಗಲಾಟೆ ಮಾಡಿಕೊಂಡು ಗಾಯಗಳಾಗಿದ್ದು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಾಗಿ ತಿಳಿದುಬಂದಿದ್ದು 12.30 ಗಂಟೆಗೆ ಸರ್ಕಾರಿ ಆಸ್ಪತ್ರೆಗೆ ಬೇಟಿ ನೀಡಿ ವೈದ್ಯಾಧಿಕಾರಿಗಳ ಅನುಮತಿಯನ್ನು ಪಡೆದು ಚಾಸಾ 1ರವರ ಹೇಳಿಕೆಯನ್ನು ಪಡೆದುಕೊಂಡು ಪುನಃ 2.00 ಗಂಟೆಗೆ ಠಾಣೆಗೆ ಬಂದು ಠಾಣಾ ಮೊಕದ್ದಮೆ ನಂ. 21/2024 ರಂತೆ ಕಲಂ 324,504,506 ಸಹಕಲಂ 34 ಐಪಿಸಿ ರೀತ್ಯ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿಕೊಂಡಿರುತ್ತೇನೆ. ಸದರಿ ಪ್ರಥಮವರ್ತಮಾನ ವರಧಿಯನ್ನು ಮಾನ್ಯ ನ್ಯಾಯಾಲಯಕ್ಕೆ ಪಿ.ಸಿ.778

ಚಂದ್ರೇಗೌಡ ರವರ ಮುಖಾಂತರ ಕಳುಹಿಸಿ ಕೊಟ್ಟಿರುತ್ತೇನೆ. ಇನ್ನೊಂದು ಪ್ರತಿಯನ್ನು ನಮ್ಮ ವೇಲಾಧಿಕಾರಿಗಳಿಗೆ ಮೇಲ್ ಮುಖಾಂತರ ಕಳುಹಿಸಿ ಕೊಟ್ಟಿರುತ್ತೇನೆ. ಈಗ ಸಾಕ್ಷಿಗೆ ನಿಪಿ-1ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದರಿಂದ ಸಾಕ್ಷಿಯಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪ್ರಥಮ ವರ್ತಮಾನ ವರಧಿಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪ್ರಥಮ ವರ್ತಮಾನ ವರಧಿಯನ್ನು ನಿಪಿ-5 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ದಿನಾಂಕ 02.02.2024 ರಂದು ಕೃತ್ಯ ಸ್ಥ,ಳದ ಪಂಚನಾಮೆಗಾಗಿ ಚಾಸಾ 2 ಮತ್ತು 5 ರವರಿಗೆ ನೋಟಿಸ್ ಜಾರಿಮಾಡಿ ಸ್ಥ,ಳಕ್ಕೆ ಬರುವಂತೆ ತಿಳಿಸಿದ್ದು ಅದರಂತೆ ಚಾಸಾ 1ರವರು ಕೃತ್ಯ ಸ್ಥಳವನ್ನು ತೋರಿಸಿದಂತೆ ಕೃತ್ಯ ಸ್ಥಳದ ಪಂಚನಾಮೆಯನ್ನು ಬೆಳಿಗ್ಗೆ 11.00 ರಿಂದ 11.30 ಗಂಟೆಯವರೆಗೆ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಪಂಚನಾಮೆಯ ಸಮಯದಲ್ಲಿ ಚಾಸಾ1 ರವರು 2 ½ ಅಡಿ ಉದ್ದ ಒಂದು ಹಿಡಿಗಾತ್ರದ ದೊಣ್ಣೆಯನ್ನು ಹಾಗೂ 2 ಅಡಿ ಉದ್ದದ ಹೆಬ್ಬೆರಳು ಗಾತ್ರದ ಒಂದು ಕಬ್ಬಿಣದ ರಾಡನ್ನು ಹಾಜರು ಪಡಿಸಿದ್ದು ಅವುಗಳನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ. ಈಗ ಸಾಕ್ಷಿಗೆ ನಿಪಿ-2 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಸದರಿ ಮುದ್ದೆಮಾಲುಗಳನ್ನು ನೋಡಿದರೆ ಗುರುತಿಸುತ್ತೇನೆ. ಈಗ ಸಾಕ್ಷಿಗೆ ಮುದ್ದೆಮಾಲು 1ಮತ್ತು 2 ಅನ್ನು ತೋರಿಸಲಾಗಿ ಸದರಿ ದೊಣ್ಣೆ ಮತ್ತು ಕಬ್ಬಿಣದ ರಾಡನ್ನು ನೋಡಿ ಗುರುತಿಸಿರುತ್ತಾರೆ.

ದಿನಾಂಕ 31.01.2024 ರಂದು ಆರೋಪಿಗಳು ಠಾಣೆಗೆ ಹಾಜರಾಗಿದ್ದು ದಸ್ತಗಿರಿ ಕ್ರಮ ಜರುಗಿಸಿ ಠಾಣ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿನಾಂಕ 02.02.2024 ರಂದು ಚಾಸಾ 2ರಿಂದ 4 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 03.02.2024 ರಂದು ಚಾಸಾ 1 ರವರ ಗಾಯದ ಪ್ರಮಾಣಪತ್ರವನ್ನು ಮಾಗಡಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಿಂದ ಚಾಸ 6 ರವರಿಂದ ಪಡೆದುಕೊಂಡಿರುತ್ತೇನೆ.

ಈಗ ಸಾಕ್ಷಿಗೆ ನಿಪಿ-4 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು.

ದಿನಾಂಕ06.02.2024 ರಂದು ಮಾನ್ಯ ನ್ಯಾಯಾಲಯಕ್ಕೆ ತಿಲಕ್ ಮತ್ತು ನೇತ್ರಾವತಿರವರ ವಿರುದ್ದ ಆರೋಪಿ ಸಾಭೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರಧಿಯನ್ನು ಸಲ್ಲಿಸಿರುತ್ತೇನೆ. ಆರೋಪಿಗಳನ್ನು ನೋಡಿದರೆ ಗುರುತಿಸುತ್ತೇನೆ. ಈಗ ಸಾಕ್ಷಿಯು ನ್ಯಾಯಾಲಯದಲ್ಲಿರುವ ಆರೋಪಿಗಳನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀಸವಾಲುಃ ಆರೋಪಿತರ ಪರ ಶ್ರೀ ಸಿ ಕೆ ಆರ್ ವಕೀಲರಿಂದಃ**

ಚಾಸಾ 1 ರವರು ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರೋ ಅಥವಾ ಹೊರರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದರೋ ಎಂದರೆ ಸಾಕ್ಷಿ ಒಳರೋಗಿಯಾಗಿ ಎಂದು ನುಡಿಯುತ್ತಾರೆ. ಆ ಸಂಬಂಧ ವೈದ್ಯಕೀಯ ಪ್ರಮಾಣಪತ್ರವನ್ನು ಪಡೆದುಕೊಂಡಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ದೊಣ್ಣೆಗಿಂತ ಕಬ್ಬಿಣದ ರಾಡು ಉದ್ದ ಇದೆ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಮಹಜರ್ ಸಮಯದಲ್ಲಿ ಚಾಸಾ 1 ರವರಿಗೆ ನೋಟಿಸ್ ಕೊಟ್ಟಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಯಾವುದೇ ಕೃತ್ಯ ನಡೆದಿರುವುದಿಲ್ಲ , ಚಾಸಾ 1 ರವರಿಗೆ ಅನುಕೂಲವಾಗಲಿ ಎಂದು ಹಾಗೂ ಆರೋಪಿಗಳಿಗೆ ತೊಂದರೆ ಕೊಡಲು ಸುಳ್ಳು ದೂರನ್ನು ಪಡೆದುಕೊಂಡು ಸುಳ್ಳು ಎಫ್ ಐ ಆರ್ ಅನ್ನು ದಾಖಲಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ನೀವು ಯಾವುದೇ ಸ್ಥಳಕ್ಕೆ ಹೋಗಿರುವುದಿಲ್ಲ ಹಾಗೂ ಅಮಾನತು ಪಡಿಸಿಕೊಂಡಿರುವುದಿಲ್ಲ ಮತ್ತು ಕೃತ್ಯ ಸ್ಥಳದ ಪಂಚನಾಮೆಯನ್ನು ಜರುಗಿಸಿರುವುದಿಲ್ಲ

ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ಅದೇ ರೀತಿ ನಿಮಗೆ ಯಾವುದೇ ಸಾಕ್ಷಿದಾರರು ಹೇಳಿಕೆ ಕೊಟ್ಟಿರುವುದಿಲ್ಲ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಆರೋಪಿಗಳ ಯಾವುದೇ ತಪ್ಪು ಇರದೇ ಇದ್ದರೂ ಚಾಸಾ 1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಗಾಯದ ಪ್ರಮಾಣಪತ್ರವನ್ನು ಸೃಷ್ಟಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ಪಿರ್ಯಾದುದಾರರರಿಗೆ ಅನುಕೂಲವಾಗಲಿ ಎಂದು ಆರೋಪಿಗಳ ವಿರುದ್ದ ಸುಳ್ಳು ಅಂತಿಮ ವರಧಿಯನ್ನು ಸಲ್ಲಿಸಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**